

# ಆರೋಪಿ ಪತ್ತೆಗೆ ಆ್ಯಪ್ ನೆರವು!

ಜನಬಳಕೆಗಷ್ಟೆ ಅಲ್ಲದೆ ಆರೋಪಿಗಳನ್ನು ಪತ್ತೆ ಹಚ್ಚಲೂ ತಂತ್ರಜ್ಞಾನವು ಪೊಲೀಸ್ ಇಲಾಖೆಗೆ ನೆರವಾಗುತ್ತಿದ್ದು, ಇದರಿಂದ ಕಿಡಿಗೇಡಿಗಳ ಎದೆಯಲ್ಲಿ ನಡುಕ ಹುಟ್ಟಿದೆ.

■ ಶಶಿಕುಮಾರ್ ಸಿ.

ಸುಮಾರು 12 ವರ್ಷಗಳ ಕಾಲ ಪೊಲೀಸರ ಕಣ್ತಪ್ಪಿಸಿಕೊಂಡು, ತಲೆಮರೆಸಿಕೊಂಡಿದ್ದ ಕೊಲೆ ಆರೋಪಿಯನ್ನು ಬೆಂಗಳೂರಿನ ಯಶವಂತಪುರ ಪೊಲೀಸ್ ಠಾಣೆಯ ಪಿಎಸ್‌ಐ ರಾಜು ಅವರು ಈಚೆಗೆ ಬಂಧಿಸಿದ್ದರು. ಈ ಆರೋಪಿಯ ಬಂಧನಕ್ಕಿಂತಲೂ ಹೆಚ್ಚು ಗಮನ ಸೆಳೆದದ್ದು ಆತನನ್ನು ಪತ್ತೆ ಹಚ್ಚಿದ ತಂತ್ರಜ್ಞಾನ ವಿಧಾನ.

ಯಶವಂತಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅನುಮಾನಾಸ್ಪದವಾಗಿ ಸುತ್ತಾಡುತ್ತಿದ್ದ ಕೊಲೆ ಆರೋಪಿ ರಮೇಶ್ ಎಂಬಾತನನ್ನು ವಶಕ್ಕೆ ಪಡೆದಿದ್ದ ಪೊಲೀಸರು ‘ಎಂ–ಸಿಸಿಟಿಎನ್‌ಎಸ್’ ಆ್ಯಪ್ ಮೂಲಕ ಆತನ ಬೆರಳಚ್ಚು ಪರಿಶೀಲನೆ ಮಾಡಿದ್ದರು. ಆರೋಪಿಯ ಬೆರಳಚ್ಚನ್ನು ಗುರುತಿಸಿದ ಆ್ಯಪ್, ಆತನ ಅಪರಾಧ ಹಿನ್ನೆಲೆಯ ಸಂಪೂರ್ಣ ಮಾಹಿತಿಯನ್ನು ಪೊಲೀಸರ ಮುಂದೆ ತೆರೆದಿಟ್ಟಿತು. ಈ ಹಿನ್ನೆಲೆ ಆತನನ್ನು ಪೊಲೀಸರು ಬಂಧಿಸಿದ್ದಾರೆ.

## ಏನಿದು ಎಂ-ಸಿಸಿಟಿಎನ್‌ಎಸ್

ಕೇಂದ್ರ ಸರ್ಕಾರದ ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೊವು ಕೆಲ ವರ್ಷಗಳ ಹಿಂದೆ ತಂತ್ರಜ್ಞಾನ ಆಧಾರಿತ ಕ್ರೈಮ್ ಆ್ಯಂಡ್ ಕ್ರಿಮಿನಲ್ ಟ್ರ್ಯಾಕಿಂಗ್ ನೆಟ್‌ವರ್ಕ್ ಸಿಸ್ಟಂ ಅನ್ನು ಅಭಿವೃದ್ಧಿಪಡಿಸಿತ್ತು. ಅಪರಾಧಗಳನ್ನು ತಡೆಗಟ್ಟುವುದು ಹಾಗೂ ಆರೋಪಿಗಳ ಹೆಡೆಮುರಿ ಕಟ್ಟುವುದು ಇದರ ಮುಖ್ಯ ಉದ್ದೇಶ. ಅಪರಾಧ ಪ್ರಕರಣಗಳ ಮಾಹಿತಿಯನ್ನು ರಾಜ್ಯ ಸರ್ಕಾರ, ಕೇಂದ್ರ ಸರ್ಕಾರ, ಬೇರೆ ಬೇರೆ ಡಿಪಾರ್ಟ್‌ಮೆಂಟ್‌ಗಳು ಹಾಗೂ ಬೇರೆ ಬೇರೆ ರಾಜ್ಯಗಳೊಂದಿಗೆ ಪರಸ್ಪರ ಹಂಚಿಕೊಳ್ಳಲು ಸಿಸಿಟಿಎನ್‌ಎಸ್ ಮುಖ್ಯವೇದಿಕೆಯಾಗಿದೆ.



ಸಿಸಿಟಿಎನ್‌ಎಸ್ ಅನ್ನು ಇನ್ನಷ್ಟು ಪರಿಣಾಮಕಾರಿಯಾಗಿ ರೂಪುಗೊಳಿಸಿರುವ ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೊವು, ಈಚೆಗೆ ಈ ಟ್ರ್ಯಾಕಿಂಗ್ ವ್ಯವಸ್ಥೆಗೆ ಹೊಸ ಸ್ಪರ್ಶ ನೀಡಿ, ಮೊಬೈಲ್ ಆ್ಯಪ್ ಅವತರಣಿಕೆಯನ್ನೂ ಪರಿಚಯಿಸಿತ್ತು. ಇದನ್ನು ಎಲ್ಲ ಪೊಲೀಸರು ಕಟ್ಟುನಿಟ್ಟಾಗಿ ಬಳಸುವಂತೆಯೂ ಸರ್ಕಾರ ಸೂಚಿಸಿದೆ. ಈ ಆ್ಯಪ್ ಅನ್ನು ಬಳಸಿಕೊಂಡು ಸಂಶಯಾಸ್ಪದ ವ್ಯಕ್ತಿಗಳನ್ನು ವಿಚಾರಣೆಗೆ ಒಳಪಡಿಸಿ, ಅವರ ಅಪರಾಧ ಕುರುಹುಗಳನ್ನು ಸುಲಭವಾಗಿ ಪತ್ತೆಹಚ್ಚಬಹುದಾಗಿದೆ.

ಅದಕ್ಕೆ ಪೂರಕವಾಗಿ ಈಚೆಗೆ ಎಲ್ಲಾ ಪೊಲೀಸ್ ಠಾಣೆಗಳಿಗೆ ಸರ್ಕಾರದ ವತಿಯಿಂದ ಎಂ–ಸಿಸಿಟಿಎನ್‌ಎಸ್ ಎಂಬ ಮೊಬೈಲ್ ಆ್ಯಪ್ ಮೂಲಕ ಬೆರಳು ಮುದ್ರೆ ಪರಿಶೀಲನೆಗಾಗಿ ಫಿಂಗರ್ ಪ್ರಿಂಟ್ ಡಿವೈಸ್ ಅನ್ನು ವಿತರಣೆ ಮಾಡಲಾಗಿದೆ. ಈ ಡಿವೈಸನ್ನು ಉಪಯೋಗಿಸಿಕೊಂಡು ಮೊಬೈಲ್ ಅಪ್ಲಿಕೇಷನ್ ಮುಖಾಂತರ ಅನುಮಾನಾಸ್ಪದ ವ್ಯಕ್ತಿಗಳ ಬೆರಳು ಮುದ್ರೆಯನ್ನು ಪರಿಶೀಲಿಸಿದರೆ, ಆ ವ್ಯಕ್ತಿಯು ಈ ಹಿಂದೆ ಯಾವುದಾದರೂ ಪ್ರಕರಣಗಳಲ್ಲಿ ಭಾಗಿಯಾಗಿದ್ದರೆ ಮಾಹಿತಿ ಸಿಗುತ್ತದೆ.

ಯಾವುದೇ ವ್ಯಕ್ತಿಯೊಬ್ಬ ಅಪರಾಧ ಕೃತ್ಯ ಎಸಗಿದಾಗ, ಆ ಪ್ರಕರಣದ ಸಂಬಂಧ ಎಲ್ಲ ಮಾಹಿತಿಯನ್ನು ಸಂಗ್ರಹಿಸಿರಬೇಕು. ಆ ಸಂಬಂಧ ಕ್ರೈಮ್ ಆ್ಯಂಡ್ ಕ್ರಿಮಿನಲ್ ಟ್ರ್ಯಾಕಿಂಗ್ ನೆಟ್‌ವರ್ಕ್ ಸಿಸ್ಟಂನಲ್ಲಿ ಮಾಹಿತಿಯನ್ನು ಅಪ್‌ಡೇಟ್ ಮಾಡಬೇಕು. ಪ್ರಕರಣಗಳು ಬಗೆಹರಿಯದೇ ಇದ್ದಾಗ, ಆರೋಪಿಗಳ ಸುಳಿವು ಪತ್ತೆಯಾಗದಿದ್ದಾಗ, ಆರೋಪಿಗಳು ತಲೆಮರೆಸಿಕೊಂಡಿದ್ದಾಗ... ಹೀಗೆ ಇಂತಹ ಹಲವು ಸನ್ನಿವೇಶಗಳಲ್ಲಿ ಎಂ–ಸಿಸಿಟಿಎನ್‌ಎಸ್ ಆ್ಯಪ್ ಪೊಲೀಸರ ನೆರವಿಗೆ ಬರುತ್ತದೆ. ■

### ಪ್ರಕರಣದ ಹಿನ್ನೆಲೆ

ಶಂಕರಪ್ಪ ಎಂಬುವವರನ್ನು 2005ರಲ್ಲಿ ರಮೇಶ್ ಕೊಲೆ ಮಾಡಿದ್ದ. ಈ ಸಂಬಂಧ ಬೆಂಗಳೂರಿನ ತಾವರೆಕೆರೆ ಪೊಲೀಸರು ಆತನನ್ನು ಬಂಧಿಸಿ ಜೈಲಿಗೆ ಕಳುಹಿಸಿದ್ದರು. 2010ರಲ್ಲಿ ಆರೋಪಿಯು ಜಾಮೀನು ಪಡೆದು ಹೊರಬಂದಿದ್ದ. ಆ ಬಳಿಕ ನ್ಯಾಯಾಲಯಕ್ಕೆ ಹಾಜರಾಗದೆ ತಲೆಮರೆಸಿಕೊಂಡಿದ್ದ.

ಆರೋಪಿಯನ್ನು ಬಂಧಿಸುವಂತೆ ನ್ಯಾಯಾಲಯವು ಹಲವ ಬಾರಿ ವಾರಂಟ್ ನೀಡಿತ್ತು. ಈಚೆಗೆ ಯಶವಂತಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅನುಮಾನಾಸ್ಪದವಾಗಿ ಸುತ್ತಾಡುತ್ತಿದ್ದದ್ದನ್ನು ಗಮನಿಸಿದ ಪೊಲೀಸರು ಆತನನ್ನು ವಶಕ್ಕೆ ಪಡೆದು, ಎಂ.ಸಿಸಿಟಿಎನ್‌ಎಸ್ ಪರಿಶೀಲನೆಗೆ ಒಳಪಡಿಸಿದಾಗ ಹಿಂದಿನ ಪ್ರಕರಣದ ಬಗ್ಗೆ ಗೊತ್ತಾಗಿದೆ.